# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 743 |
| 2. ಮಾನ್ಯ ಸದಸ್ಯರ ಹೆಸರು | : | ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3. ಉತ್ತರಿಸಬೇಕಾದ ದಿನಾಂಕ | : | 10.03.2020 |
| 4. ಉತ್ತರಿಸುವ ಸಚಿವರು | : | ಸಹಕಾರ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| 1 | ಕಲ್ಯಾಣ ಕರ್ನಾಟಕ ಭಾಗದ ಮುಖ್ಯ ಬೆಳೆಯಾದ ತೊಗರಿ ಬೆಳೆಯನ್ನು ರೈತರಿಂದ ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಇದುವರೆಗೆ ಎಷ್ಟು ಕ್ವಿಂಟಾಲ್ ತೊಗರಿ ಬೆಳೆಯನ್ನು ರೈತರಿಂದ ಖರೀದಿ ಮಾಡಲಾಗಿದೆ. | ತೊಗರಿ ಉತ್ಪನ್ನವನ್ನು ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸಲಾಗುತ್ತಿದೆ. ಖರೀದಿ ಪ್ರಕ್ರಿಯೆ ದಿ:15.03.2020ರವರೆಗೆ ಜಾರಿಯಲ್ಲಿರುತ್ತದೆ. ದಿನಾಂಕ:07.03.2020ರ ಅಂತ್ಯಕ್ಕೆ 19,16,414 ಕ್ವಿಂಟಾಲ್ ತೊಗರಿಯನ್ನು 2,14,124 ರೈತರಿಂದ ಖರೀದಿಸಲಾಗಿರುತ್ತದೆ. |
| 2 | ರೈತರಿಂದ ಖರೀದಿ ಮಾಡಿದ ತೊಗರಿ ಬೆಳೆಗೆ ಸಮರ್ಪಕವಾಗಿ ಹಣ ಸಂದಾಯ ಮಾಡಲಾಗುತ್ತಿದೆಯೇ; ಇದುವರೆಗೆ ಎಷ್ಟು ಹಣವನ್ನು ರೈತರಿಗೆ ಪಾವತಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್ ತೊಗರಿಗೆ ರೂ.5,800/- ಬೆಂಬಲ ಬೆಲೆ ನಿಗಧಿಪಡಿಸಿದ್ದು, ರಾಜ್ಯ ಸರ್ಕಾರದ ಪ್ರೋತ್ಸಾಹಧನ ರೂ.300/-ಸೇರಿಸಿ ಪ್ರತಿ ಕ್ವಿಂಟಾಲ್ ತೊಗರಿಗೆ ಒಟ್ಟಾರೆ ರೂ.6,100/- ನಿಗಧಿಪಡಿಸಿ ಖರೀದಿಸಲಾಗುತ್ತಿದೆ.<br><br>ಖರೀದಿ ಪ್ರಕ್ರಿಯೆ ಜಾರಿಯಲ್ಲಿದ್ದು, ಸಧ್ಯದಲ್ಲಿಯೇ ಹಣ ಪಾವತಿ ಬಗ್ಗೆ ಕ್ರಮವಹಿಸಲಾಗುವುದು. |
| 3 | ರೈತರಿಂದ ತೊಗರಿ ಬೆಳೆಯನ್ನು ಖರೀದಿಸಲು ಸರ್ಕಾರ ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ; ಇದರಿಂದ ರೈತರಿಗೆ ಅನುಕೂಲವಾಗುತ್ತಿದೆಯೆ; ಆಗದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? | ಕೇಂದ್ರ ಸರ್ಕಾರವು ನಿಗಧಿಪಡಿಸಿರುವ ಮಾರ್ಗಸೂಚನೆಗಳನ್ವಯ ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ನಿರ್ಣಯದನ್ವಯ ಗರಿಷ್ಠ 10 ಕ್ವಿಂಟಾಲ್ ತೊಗರಿಯನ್ನು ಖರೀದಿಸಲಾಗುತ್ತಿದ್ದು, ಇದರಿಂದ ರೈತರಿಗೆ ಅನುಕೂಲವಾಗಿರುತ್ತದೆ. |

**ಸಂಖ್ಯೆ: ಸಇ 126 ಎಂಆರ್‌ಇ 2020**

(signature)
(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು